## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : ರಾಜ್ಯದಲ್ಲಿ ನೂತನವಾಗಿ ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯನ್ನು ಸೃಜಿಸುವುದು ಹಾಗೂ ಈ ಸಂಬಂಧ ಕರ್ನಾಟಕ ಸರ್ಕಾರ ಸಚಿವಾಲಯದಲ್ಲಿ ಅವಶ್ಯವಿರುವ ಸರ್ಕಾರದ ಕಾರ್ಯದರ್ಶಿ ಹಾಗೂ ಪೂರಕ ಸಿಬ್ಬಂದಿಗಳನ್ನು ಸೃಜಿಸುವ ಬಗ್ಗೆ.

ಓದಲಾಗಿದೆ : ಕಾರ್ಮಿಕ ಇಲಾಖೆಯ ಕಡತ ಸಂಖ್ಯೆ ಕಾಇ 171 ಇಟಿಐ 2016.

* * * * * *

ಪ್ರಸ್ತಾವನೆ :

2016-17ನೇ ಸಾಲಿನ ಆಯವ್ಯಯ ಭಾಷಣದಲ್ಲಿ ರಾಜ್ಯದಲ್ಲಿ ನೂತನವಾಗಿ ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಇಲಾಖೆಯನ್ನು ಸೃಜಿಸಲು ಘೋಷಿಸಲಾಗಿದ್ದು, ಆಯವ್ಯಯ ಭಾಷಣದ ಕಂಡಿಕೆ 367 ರಲ್ಲಿ ಈ ಕೆಳಕಂಡ ಘೋಷಣೆಯನ್ನು ಮಾಡಲಾಗಿದೆ :

"ಉದ್ಯೋಗಾವಕಾಶ ಹೆಚ್ಚಿಸುವ ಏಕೈಕ ಉದ್ದೇಶದಿಂದ ಎಲ್ಲಾ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳನ್ನು ಒಂದೇ ಇಲಾಖೆಯಡಿ ತರಲು ಉದ್ದೇಶಿಸಿದ್ದು ಕೌಶಲ್ಯಾಭಿವೃದ್ಧಿ ಮತ್ತು ಜೀವನೋಪಾಯ ಇಲಾಖೆಯನ್ನು ಸೃಜಿಸಲಾಗುವುದು. ಇದು ಮಾನ್ಯ ಮುಖ್ಯಮಂತ್ರಿಗಳ ನೇರ ನಿಯಂತ್ರಣದಲ್ಲಿ ಇರುತ್ತದೆ. ಇದು ಕೌಶಲ್ಯ ಅಭಿವೃದ್ಧಿಯನ್ನು ತೀವ್ರ ಗತಿಯಲ್ಲಿ (Mission Mode) ಹೆಚ್ಚಿಸುವ ದಿಸೆಯಲ್ಲಿ ಸಾಧ್ಯವಾಗುವುದರೊಂದಿಗೆ ವಿವಿಧ ಇಲಾಖೆಗಳೊಂದಿಗೆ ಸಮನ್ವಯತೆಯನ್ನು ಸಾಧಿಸುವುದನ್ನು ಖಾತರಿಪಡಿಸುತ್ತದೆ. ಸಾಂಪ್ರದಾಯಿಕ ಮತ್ತು ಅಸಾಂಪ್ರದಾಯಿಕ ವಿಧಾನಗಳಲ್ಲಿ ಹಣಕಾಸು ದೊರಕಿಸುವ ಸಾಧ್ಯತೆಗಳನ್ನು ಸಹ ಈ ಧ್ಯೇಯವು ಕಂಡುಕೊಳ್ಳಲಿದೆ. ಈ ಉದ್ದೇಶಕ್ಕಾಗಿ 2016-17ನೇ ಸಾಲಿನಲ್ಲಿ 500 ಕೋಟಿ ರೂ.ಗಳನ್ನು ಕ್ರೋಢೀಕರಿಸಲಾಗುವುದು".

ಪ್ರಸಕ್ತ ವ್ಯವಸ್ಥೆಯಲ್ಲಿ ರಾಜ್ಯದ ಅನೇಕ ಇಲಾಖೆಗಳು, ನಿಗಮ ಮಂಡಳಿಗಳು ಕೌಶಲಾಭಿವೃದ್ಧಿ ತರಬೇತಿಯನ್ನು ನೀಡುತ್ತಿರುತ್ತವೆ. ಆದರೆ ಈ ಕೌಶಲ್ಯಾಭಿವೃದ್ಧಿ ತರಬೇತಿಗಳಲ್ಲಿ ಪುನರುಕ್ತಿಯಾಗುವ (duplication) ಸಾಧ್ಯತೆ ಇದ್ದು, ಇವುಗಳ ಸೂಕ್ತ ಮೇಲ್ವಿಚಾರಣೆ ಕೈಗೊಳ್ಳುವ "ಏಕೀಕೃತ ಮೇಲ್ವಿಚಾರಣಾ ವ್ಯವಸ್ಥೆ" ಜಾರಿಗೊಳಿಸಬೇಕಾಗಿದೆ. ಎಲ್ಲಾ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳನ್ನು ಉದ್ಯೋಗಾವಕಾಶ ಹೆಚ್ಚಿಸುವ ಉದ್ದೇಶದಿಂದ ಒಂದೇ ಇಲಾಖೆಯಡಿಯಲ್ಲಿ ತರಲು ಸರ್ಕಾರವು ನಿರ್ಣಯಿಸಿದೆ. ಇದರಿಂದ ರಾಜ್ಯದ ಯುವಜನತೆಗೆ, ದುಡಿಯುವ ಕೈಗಳಿಗೆ ಉತ್ತಮ ಬೆಳವಣಿಗೆಗೆ ಹಾಗೂ ಅದರಲ್ಲೂ ಸಮಾಜದ ಅಂಚಿನಲ್ಲಿರುವ ಗುಂಪುಗಳ ಅಂತರ್ಗತ ಬೆಳವಣಿಗೆಗೆ ಇದು ಅವಶ್ಯವಿದ್ದು ಯೋಗ್ಯ ಕೆಲಸ ಹಾಗೂ ಜೀವನೋಪಾಯ ನಿರ್ವಹಣೆಗೆ ಅತ್ಯಗತ್ಯವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಪ್ರಸಕ್ತ ವ್ಯವಸ್ಥೆಯನ್ನು ಏಕೀಕೃತ ಮೇಲ್ವಿಚಾರಣೆಯಲ್ಲಿ ಅನುಷ್ಠಾನಗೊಳಿಸಲು ಸರ್ಕಾರವು ಯೋಜಿಸಿದ್ದು, ಇದರಿಂದ ಗ್ರಾಮಮಟ್ಟದಿಂದ ಹಿಡಿದು ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದವರೆಗೆ ಕೌಶಲ್ಯಾಭಿವೃದ್ಧಿ ತರಬೇತಿಗೆ ಫಲಾನುಭವಿಗಳ ಆಯ್ಕೆ ಹಾಗೂ ತರಬೇತಿ ನೀಡಲು ಸಹಾಯಕವಾಗಲಿದೆ.